Bangalore
Regional News
23.09.2025 / 6.40 pm
ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

<u>ಮುಖ್ಯಾಂಶಗಳು :</u>

೧. ಸಾಮಾಜಿಕ ಶೈಕ್ಷಣಿಕ ಸಮೀಕ್ಷೆ; ೧೪ ಉಪಜಾತಿಗಳನ್ನು ಕೈಬಿಟ್ಟ ಹಿಂದುಳಿದ ವರ್ಗಗಳ ಆಯೋಗ

೨. ಬೆಂಗಳೂರಿನ ನಿಮ್ಹಾನ್ಸ್‌ನಲ್ಲಿ ೧೦ನೇ ರಾಷ್ಟ್ರೀಯ ಆಯುರ್ವೇದ ದಿನಾಚರಣೆ; ಆಯುರ್ವೇದದ ಮಹತ್ವ ಸಾರಿದ ಕಾರ್ಯಕ್ರಮ

೩. ರಾಜ್ಯದೆಲ್ಲೆಡೆ ಇಂದು ಪೌರಕಾರ್ಮಿಕರ ದಿನಾಚರಣೆ; ಸ್ವಚ್ಛ ಭಾರತ್ ಮಿಷನ್ ಯಶಸ್ವಿಗೊಳಿಸಲು ಕರೆ

೪. ಕನ್ನಡದ ಕಂದೀಲು, ಸನ್ ಫ್ಲವರ್ಸ್ ಗೆ ೭೧ನೇ ರಾಷ್ಟ್ರೀಯ ಚಲನಚಿತ್ರ ಪ್ರಶಸ್ತಿ

><><><><

ರಾಜ್ಯದಲ್ಲಿ ಸಾಮಾಜಿಕ, ಆರ್ಥಿಕ ಸಮೀಕ್ಷೆ ನಡೆಸುತ್ತಿರುವ ಹಿಂದುಳಿದ ವರ್ಗಗಳ ಆಯೋಗ ಆದಿ ಆಂಧ್ರ ಕ್ರಿಶ್ಚಿಯನ್, ಆದಿ ಕರ್ನಾಟಕ ಕ್ರಿಶ್ಚಿಯನ್, ಆದಿ ದ್ರಾವಿಡ ಕ್ರಿಶ್ಚಿಯನ್ ಸೇರಿದಂತೆ ೧೪ ಉಪ ಜಾತಿಗಳನ್ನು ಕೈಬಿಟ್ಟು ಪಟ್ಟಿಯನ್ನು ಅಂತಿಮಗೊಳಿಸಿದೆ. ಈ ವಿಷಯವನ್ನು ರಾಜ್ಯ ಹಿಂದುಳಿದ ವರ್ಗಗಳ ಆಯೋಗ ಪ್ರಕಟಣೆಯಲ್ಲಿ ತಿಳಿಸಿದೆ. ಹಿಂದುಳಿದ ವರ್ಗಗಳ ಆಯೋಗಕ್ಕೆ ೧೪ ಉಪ ಜಾತಿಗಳನ್ನು ಸಮೀಕ್ಷೆಯಲ್ಲಿ ಸೇರಿಸಬಾರದು ಎಂದು ಬಿಜೆಪಿ ಇಂದು ಒತ್ತಾಯಿಸಿತ್ತು.

><><><><

ಬೆಂಗಳೂರಿನ ಮಾನಸಿಕ ಆರೋಗ್ಯ ಮತ್ತು ನರ ವಿಜ್ಞಾನ ಸಂಸ್ಥೆ ಹಾಗೂ ಭಾರತ ಸರ್ಕಾರದ ಆಯುಷ್ ಸಚಿವಾಲಯದ ಸಹಯೋಗದಲ್ಲಿ ೧೦ನೇ ರಾಷ್ಟ್ರೀಯ ಆಯುರ್ವೇದ ದಿನ ಆಚರಿಸಲಾಯಿತು. ನಿಮ್ಹಾನ್ಸ್‌ನ ನಿವೃತ್ತ ನಿರ್ದೇಶಕ ಡಾ. ವಿ. ನಾಗರಾಜ್ ಕಾರ್ಯಕ್ರಮ ಉದ್ಘಾಟಿಸಿದರು. ಈ ಸಂದರ್ಭದಲ್ಲಿ ಸ್ವಾಸ್ಥ್ಯ ಮಾನಸ್ ಎಂಬ ಘೋಷವಾಕ್ಯವನ್ನು ಬಿಡುಗಡೆ ಮಾಡಲಾಯಿತು. "ಸಂಯೋಜನಂ ಸಮತ್ವಂ ಸ್ವಾಸ್ಥ್ಯಮಾನಸ್" ಎಂಬ ಘೋಷಣೆಯು ಮಾನಸಿಕ ಆರೋಗ್ಯಕ್ಕಾಗಿ ಸಮಗ್ರ ಔಷಧ - ಸಂಯೋಜನಂ, ಸಮತ್ವಂ ಮತ್ತು ಸ್ವಾಸ್ಥ್ಯಮಾನಸ್ ಸಾರವನ್ನು

ಒಳಗೊಂಡಿದೆ. ಇನ್ನೊಂದೆಡೆ ಬೆಂಗಳೂರಿನ ತೋಟಗಾರಿಕಾ ಸಂಶೋಧನಾ ಸಂಸ್ಥೆಯಲ್ಲಿ ೧೦ನೇ ರಾಷ್ಟ್ರೀಯ ಆಯುರ್ವೇದ ದಿನವನ್ನು ಆಚರಿಸಲಾಯಿತು. ಕಾರ್ಯಕ್ರಮದಲ್ಲಿ ಪ್ರಾಚೀನ ಭಾರತದ ಆಯುರ್ವೇದ ಪದ್ಧತಿಗಳ ಮಹತ್ವವನ್ನು ವಿವರಿಸಲಾಯಿತು.

><><><><

ಮಹಿಳೆಯರ ಸ್ವಾಭಿಮಾನ, ಸಮೃದ್ಧಿ, ತಾಳ್ಮೆ, ಶಕ್ತಿಯ ಪ್ರತೀಕವೇ ದಸರಾ ಹಬ್ಬ ಎಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ್ ತಿಳಿಸಿದ್ದಾರೆ. ನಾಡಹಬ್ಬ ದಸರಾ ಅಂಗವಾಗಿ ಮಹಿಳಾ ಮತ್ತು ಮಕ್ಕಳ ದಸರಾ ಉಪಸಮಿತಿಯ ವತಿಯಿಂದ ಮೈಸೂರು ನಗರದ ಜೆ. ಕೆ ಮೈದಾನದಲ್ಲಿ ಆಯೋಜಿಸಲಾಗಿದ್ದ, ಮಹಿಳಾ ದಸರಾವನ್ನು ಉದ್ಘಾಟಿಸಿ ಮಾತನಾಡಿದರು. ಮಹಿಳೆಯರು ಕೇವಲ ಅಡುಗೆ ಮನೆಗೆ, ನಾಲ್ಕು ಗೋಡೆಗಳಿಗೆ ಸೀಮಿತವಾಗದೆ ಅದರಿಂದ ಹೊರಬಂದು ಸ್ವಂತ ಜೀವನ ನಡೆಸುತ್ತಿದ್ದಾರೆ. ಹೂ ಕಟ್ಟುವುದರಿಂದ ಹಿಡಿದು ಚಂದ್ರಯಾನಕ್ಕೆ ತಲುಪುವಂತಹ ಶಕ್ತಿಯನ್ನು ಹೊಂದಿರುವವರು ಮಹಿಳೆಯರು ಎಂದು ಅಭಿಪ್ರಾಯಪಟ್ಟಿದ್ದಾರೆ.

><><><><

ಭಾರತೀಯ ವಾಯುಪಡೆಯ ಸಾರಂಗ್ ಹೆಲಿಕಾಪ್ಟರ್ ಪ್ರದರ್ಶನ ತಂಡವು ಮೈಸೂರು ದಸರಾ ಮಹೋತ್ಸವದ ಭಾಗವಾಗಿ ಮೈಸೂರಿನಲ್ಲಿ ಪ್ರದರ್ಶನ ನೀಡಲಿದೆ. ೨೦೦೩ರಲ್ಲಿ ರಚನೆಯಾದ ಸಾರಂಗ್ ತಂಡವು ಭಾರತೀಯ ವಾಯುಪಡೆಯ ಬ್ರಾಂಡ್ ರಾಯಭಾರಿಯಾಗಿದೆ. ಈ ತಂಡವು ರಾಷ್ಟ್ರ ಮತ್ತು ಅಂತಾರಾಷ್ಟ್ರೀಯ ಮಟ್ಟದಲ್ಲಿ ೩೮೯ ಕ್ಕೂ ಅಧಿಕ ಸ್ಥಳಗಳಲ್ಲಿ ೧ ಸಾವಿರದ ೨೦೦ಕ್ಕೂ ಅಧಿಕ ಪ್ರದರ್ಶನಗಳನ್ನು ನೀಡಿದೆ. ಮೈಸೂರಿನ ಪ್ರಸಿದ್ಧ ಬನ್ನಿಮಂಟಪ ಮೈದಾನದಲ್ಲಿ ಈ ತಂಡವು ಪ್ರದರ್ಶನ ನೀಡಲಿದೆ.

><><><><

ಬೆಂಗಳೂರು ಗ್ರಾಮಾತರ ಜಿಲ್ಲೆಯ ದೊಡ್ಡಬಳ್ಳಾಪುರ ನಗರಸಭೆ ವತಿಯಿಂದ ಇಂದು ಪೌರಕಾರ್ಮಿಕ ದಿನಾಚರಣೆ ಆಚರಿಸಲಾಯಿತು. ನಗರಸಭೆ ಅಧ್ಯಕ್ಷೆ ಸುಮಿತ್ರ ಮಾತನಾಡಿ, ನಗರದ ಸ್ವಚ್ಛತೆಯಲ್ಲಿ ಪೌರ ಕಾರ್ಮಿಕರ ಪಾತ್ರ ಮಹತ್ವದ್ದಾಗಿದ್ದು, ಸರ್ಕಾರದ ಸೌಲಭ್ಯಗಳನ್ನು ಪಡೆಯುವ ಮೂಲಕ ಉತ್ತಮವಾಗಿ ಕಾರ್ಯ ನಿರ್ವಹಿಸುವಂತೆ ತಿಳಿಸಿದರು. ಚಿಕ್ಕಬಳ್ಳಾಪುರ ನಗರ ಸುಂದರವಾಗಿ ಮತ್ತು ಸ್ವಚ್ಛವಾಗಿ ಕಾಣುವಂತೆ ಮಾಡುವ ಜೊತೆಗೆ ಸಾರ್ವಜನಿಕರ ಆರೋಗ್ಯ ಕಾಪಾಡುವಲ್ಲಿ ಪೌರ ಕಾರ್ಮಿಕರ ಪಾತ್ರ ಮಹತ್ವದ್ದಾಗಿದೆ ಎಂದು ಚಿಕ್ಕಬಳ್ಳಾಪುರ ಜಿಲ್ಲೆಯ ಗೌರಿಬಿದನೂರು ಶಾಸಕ ಕೆ.ಹೆಚ್.ಪುಟ್ಟಸ್ವಾಮಿಗೌಡ ತಿಳಿಸಿದ್ದಾರೆ. ಬೆಳಗಾವಿ ಜಿಲ್ಲೆಯ ಗ್ರಾಮ ಪಂಚಾಯತಿಗಳ ವ್ಯಾಪ್ತಿಯಡಿ

ಕಾರ್ಯನಿರ್ವಹಿಸುತ್ತಿರುವ ಸ್ವಚ್ಛತಾಗಾರರ ಆರೋಗ್ಯದ ಹಿತದೃಷ್ಟಿಯಿಂದ ಸಾರ್ವಜನಿಕ ಆಸ್ಪತ್ರೆಗಳಲ್ಲಿ ಆರೋಗ್ಯ ತಪಾಸಣೆ ಕೈಗೊಳ್ಳಬೇಕು ಮತ್ತು ಸ್ವಚ್ಛತಾಗರರ ಸುರಕ್ಷತೆಗಾಗಿ ಕಡ್ಡಾಯವಾಗಿ ಸುರಕ್ಷಿತ ಪರಿಕರನ್ನು ನೀಡಬೇಕು ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಣಾಧಿಕಾರಿ ರಾಹುಲ್ ಶಿಂಧೆ ನಿರ್ದೇಶನ ನೀಡಿದ್ದಾರೆ. ಸ್ವಚ್ಛ ಭಾರತ್ ಮಿಷನ್ ಯಶಸ್ವಿಗೊಳಿಸುವಂತೆ ಅವರು ಕರೆ ನೀಡಿದ್ದಾರೆ.

><><><><

ನವದೆಹಲಿಯ ವಿಜ್ಞಾನ ಭವನದಲ್ಲಿ ನಡೆದ ೭೧ನೇ ರಾಷ್ಟ್ರೀಯ ಚಲನಚಿತ್ರ ಪ್ರಶಸ್ತಿ ಪ್ರದಾನ ಸಮಾರಂಭದಲ್ಲಿ ಹಿರಿಯ ನಟ ಮೋಹನ್ ಲಾಲ್‌ಗೆ ರಾಷ್ಟ್ರಪತಿ ದ್ರೌಪದಿ ಮುರ್ಮು ದಾದಾ ಪಾಲ್ಕೆ ಪ್ರಶಸ್ತಿ ಪ್ರದಾನ ಮಾಡಿದರು. ಯಶೋಧಾ ಪ್ರಕಾಶ್ ಅವರ 'ಕಂದೀಲು ದ ರೇ ಆಫ್ ಹೋಪ್' ಚಿತ್ರಕ್ಕೆ ೭೧ನೇ ರಾಷ್ಟ್ರೀಯ ಚಲನಚಿತ್ರ ಪ್ರಶಸ್ತಿ ಪ್ರದಾನ ಸಮಾರಂಭದಲ್ಲಿ 'ಅತ್ಯುತ್ತಮ ಕನ್ನಡ ಚಲನಚಿತ್ರ' ಪ್ರಶಸ್ತಿ ನೀಡಲಾಯಿತು. ಅತ್ಯುತ್ತಮ ಕಥೆ ವಿಭಾಗದಲ್ಲಿ ಮೈಸೂರಿನ ವೈದ್ಯ ಡಾ.ಚಿದಾನಂದ ಎಸ್. ನಾಯಕ್ ನಿರ್ದೇಶನದ ಸನ್ ಫ್ಲವರ್ಸ್‌ಗೆ ಪ್ರಶಸ್ತಿ ಲಭಿಸಿದೆ.

><><><><

ಕುವೆಂಪು ರಚಿತ ನಾಡಗೀತೆಗೆ ೧೦೦ ವರ್ಷಗಳು ತುಂಬಿದ ಹಿನ್ನೆಲೆ ಮೈಸೂರಿನ ಮಾನಸ ಗಂಗೋತ್ರಿ ಬಯಲು ರಂಗಮಂದಿರದಲ್ಲಿ ಇಂದು ನಾಡಗೀತೆಗೆ ನೂರರ ಸಂಭ್ರಮ,ಸಾವಿರಾರು ಸ್ವರಗಳ ಸಂಗಮ ಎಂಬ ವಿಶೇಷ ಕಾರ್ಯಕ್ರಮ ಜರುಗಿತು. ಕಾರ್ಯಕ್ರಮದಲ್ಲಿ ಶಾಲಾ ಕಾಲೇಜು ವಿದ್ಯಾರ್ಥಿಗಳು, ಅಧ್ಯಾಪಕರು, ಸಾರ್ವಜನಿಕರು ಸೇರಿದಂತೆ ಸುಮಾರು ೨೦ ಸಾವಿರ ಮಂದಿ ನಾಡಗೀತೆಯನ್ನು ಏಕಕಾಲಕ್ಕೆ ಹಾಡಿದರು. ಸಮಾರಂಭದಲ್ಲಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಸಚಿವರಾದ ಶಿವರಾಜ್ ತಂಗಡಗಿ ಭಾಗವಹಿಸಿದ್ದರು. ಶಾಸಕರಾದ ಹರೀಶ್ ಗೌಡ, ಜಿ.ಟಿ.ದೇವೆಗೌಡ, ಶ್ರೀ ವತ್ಸ, ರವಿಶಂಕರ್ ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದರು. ಕುಲಸಚಿವೆ ಎಂ. ಕೆ. ಸವಿತಾ ಈ ವಿನೂತನ ಕಾರ್ಯಕ್ರಮದ ಕುರಿತು ಆಕಾಶವಾಣಿಯೊಂದಿಗೆ ಮಾಹಿತಿ ಹಂಚಿಕೊಂಡರು.

ಧ್ವನಿ : ಎಂ. ಕೆ. ಸವಿತಾ, ಕುಲಸಚಿವೆ ( ೩೮ ಸೆಕೆಂಡುಗಳು)

><><><><

ಪ್ರಧಾನಿ ನರೇಂದ್ರ ಮೋದಿ ಬಾಲ್ಯದ ದಿನಗಳ ಚರಿತ್ರೆ ಆಧಾರಿತ 'ಚಲೋ ಜೀತೆ ಹೈ' ಕಿರು ಚಿತ್ರವನ್ನು ಧಾರವಾಡ ಐನಾಕ್ಸ್ ನ ಸ್ಮಾರ್ಟ್ ಸಿಟಿ ಮಾಲ್ ನಲ್ಲಿ ಪ್ರದರ್ಶಿಸಲಾಯಿತು. ಕಿರುಚಿತ್ರದ ಪ್ರದರ್ಶನದ ಐದನೇ ದಿನವೇ ಸಾರ್ವಜನಿಕರಿಂದ ಉತ್ತಮ ಪ್ರತಿಕ್ರಿಯೆ ವ್ಯಕ್ತವಾಗಿದೆ. ಆಕಾಶವಾಣಿಯೊಂದಿಗೆ ಮಾತನಾಡಿದ ನಿಂಗಪ್ಪ ಸತ್ತುಗಟ್ಟಿ ಈ ಚಿತ್ರ ಎಲ್ಲರಿಗೂ ಪ್ರೇರಣೆ ನೀಡಿದೆ ಎಂದು ತಿಳಿಸಿದರು.

ಧ್ವನಿ : ನಿಂಗಪ್ಪ ಸತ್ತುಗಟ್ಟಿ, ( ೨೧ ಸೆಕೆಂಡುಗಳು)

><><><><

ಅಸಂಘಟಿತ ಕಾರ್ಮಿಕರ ಸಾಮಾಜಿಕ ಭದ್ರತಾ ಮಂಡಳಿ, ಸಾರಿಗೆ ಇಲಾಖೆ ಹಾಗೂ ಜಿಲ್ಲಾಡಳಿತ ವತಿಯಿಂದ ಹಮ್ಮಿಕೊಂಡಿದ್ದ ಅಸಂಘಟಿತ ಕಾರ್ಮಿಕರಿಗೆ ಸ್ಮಾರ್ಟ್ ಕಾರ್ಡ್ ವಿತರಣೆ ಹಾಗೂ ವಿವಿಧ ಯೋಜನೆಗಳ ಅರಿವು ಮೂಡಿಸುವ ಕಾರ್ಯಕ್ರಮಕ್ಕೆ ಚಿಕ್ಕಮಗಳೂರಿನಲ್ಲಿಂದು ಕಾರ್ಮಿಕ ಸಚಿವ ಸಂತೋಷ್ ಲಾಡ್ ಚಾಲನೆ ನೀಡಿದರು. ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ರಾಜ್ಯದಲ್ಲಿ ಸಾಮಾಜಿಕ ಮತ್ತು ಆರ್ಥಿಕ ಸಮೀಕ್ಷೆ ನಡೆಸಲಾಗುತ್ತಿದ್ದು, ರಾಜಕೀಯ ದುರುದ್ದೇಶದಿಂದ ಬಿಜೆಪಿ ವಿರೋಧ ಮಾಡುತ್ತಿದೆ ಎಂದು ದೂರಿದ್ದಾರೆ.

><><><><

ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರದ ಸೂಚನೆಯಂತೆ ದಕ್ಷಿಣ ಕನ್ನಡ ಜಿಲ್ಲೆಯಲ್ಲಿಯೂ ಸಾಮಾನ್ಯ ಜನರು ಹಾಗೂ ಜಿಲ್ಲಾ ಪ್ರಾಧಿಕಾರದ ಕೊಂಡಿಯಾಗಿ ಅರ್ಹರಿಗೆ ಅಗತ್ಯ ಕಾನೂನು ಸೇವೆಗಳನ್ನು ಒದಗಿಸಲು ನ್ಯಾಯ ಮಿತ್ರರ ನೇಮಕ ಪ್ರಕ್ರಿಯೆ ನಡೆಯುತ್ತಿದೆ. ಆಸಕ್ತರು ಅರ್ಜಿ ಸಲ್ಲಿಸಬಹುದು ಎಂದು ದಕ್ಷಿಣ ಕನ್ನಡ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಜೈಬುನ್ನಿಸಾ ತಿಳಿಸಿದ್ದಾರೆ. ಮಂಗಳೂರಿನಲ್ಲಿಂದು ಮಾತನಾಡಿದ ಅವರು, ಬಾಲ್ಯವಿವಾಹ, ಬಹಿಷ್ಕಾರ ಪದ್ಧತಿ, ಮಕ್ಕಳ ಅಪಹರಣ, ದೌರ್ಜನ್ಯ ಪ್ರಕರಣಗಳು ಸೇರಿದಂತೆ ನಾನಾ ವಿಧದ ಕಾನೂನುಗಳ ಕುರಿತಂತೆ ಸಾರ್ವಜನಿಕರು ಹಾಗೂ ಪ್ರಾಧಿಕಾರದ ನಡುವೆ ಮಾಹಿತಿದಾರರಾಗಿ ಈ ನ್ಯಾಯ ಮಿತ್ರರು ಕಾರ್ಯನಿರ್ವಹಿಸಲಿದ್ದಾರೆ ಎಂದು ತಿಳಿಸಿದ್ದಾರೆ.

><><><><

ದಸರಾ ಮತ್ತು ಶಬರಿಮಲೆ ಯಾತ್ರೆಯ ಪ್ರಯುಕ್ತ ಪ್ರಯಾಣಿಕರ ಹೆಚ್ಚುವರಿ ದಟ್ಟಣೆ ನಿವಾರಿಸಲು, ಹುಬ್ಬಳ್ಳಿ ಮತ್ತು ಕೊಲ್ಲಂ ನಡುವೆ ೧೪ ಟ್ರಿಪ್ ವಿಶೇಷ ಎಕ್ಸ್ ಪ್ರೆಸ್ ರೈಲು ಸಂಚಾರ ಆರಂಭಿಸಲಾಗುವುದು ಎಂದು ನೈರುತ್ಯ ರೈಲ್ವೆ ತಿಳಿಸಿದೆ. ಸೆಪ್ಟೆಂಬರ್ ೨೮ರಿಂದ ಆರಂಭವಾಗಲಿರುವ ಈ ರೈಲು ಸೌಲಭ್ಯ ಬೆಂಗಳೂರಿನ ಮಾರ್ಗವಾಗಿ ಕೇರಳದ ಹುಬ್ಬಳ್ಳಿ ಮತ್ತು ಕೊಲ್ಲಂ ಜಂಕ್ಷನ್‌ಗಳ ನಡುವೆ ಹಾದು ಹೋಗಲಿದೆ.

**><><><><**

ಬೆಂಗಳೂರು ಪೂರ್ವ ನಗರ ಪಾಲಿಕೆ ವ್ಯಾಪ್ತಿಯ ಇಬ್ಬಲೂರು ಜಂಕ್ಷನ್ ನಿಂದ ಟಿನ್ ಫ್ಯಾಕ್ಟರಿವರೆಗೆ ಇಂದು ಪಾದಚಾರಿ ಮಾರ್ಗ ಒತ್ತುವರಿ ತೆರವು ಕಾರ್ಯಾಚರಣೆ ಹಾಗೂ ಸ್ವಚ್ಛತಾ ಅಭಿಯಾನ ಕೈಗೊಳ್ಳಲಾಯಿತು.  ಅಧಿಕಾರಿಗಳು ಜವಾಬ್ದಾರಿಯುತವಾಗಿ ಕಾರ್ಯನಿರ್ವಹಿಸುವಂತೆ ಆಯುಕ್ತ ಡಿ.ಎಸ್.ರಮೇಶ್ ಸೂಚಿಸಿದ್ದಾರೆ. ಅಧಿಕಾರಿಗಳು ತಮಗೆ ನೀಡಿರುವ ಕೆಲಸಗಳನ್ನು ಸರಿಯಾಗಿ ನಿರ್ವಹಿಸದಿದ್ದರೆ ನಿರ್ದಾಕ್ಷಿಣ್ಯವಾಗಿ ಕ್ರಮ ತೆಗೆದುಕೊಳ್ಳಲಾಗುವುದೆಂದು ಎಚ್ಚರಿಕೆ ನೀಡಿದ್ದಾರೆ.

**><><><><**

ಕೇಂದ್ರ ಸರ್ಕಾರ ವಿವಿಧ ಸರಕು ಮತ್ತು ಸೇವೆಗಳ ಮೇಲಿನ ಜಿಎಸ್‌ಟಿ ಯನ್ನು ಶೇಕಡಾ ೫ ರವರೆಗೆ ಇಳಿಕೆ ಮಾಡಿರುವುದು ದೇಶದ ಜನರ ಆರ್ಥಿಕ ಚೈತನ್ಯವನ್ನು ಹೆಚ್ಚಿಸಲು ಸಹಕಾರಿಯಾಗಲಿದೆ ಎಂದು ಸಂಸದ ಡಾ.ಕೆ.ಸುಧಾಕರ್ ತಿಳಿಸಿದ್ದಾರೆ. ಚಿಕ್ಕಬಳ್ಳಾಪುರದಲ್ಲಿ ಇಂದು ಮಾತನಾಡಿದ ಅವರು, ಪ್ರಧಾನಿ ದೇಶದ ಜನರಿಗೆ ನವರಾತ್ರಿ, ದೀಪಾವಳಿ ಹಬ್ಬಗಳ ಕೊಡುಗೆಯಾಗಿ ನೀಡಿದ್ದಾರೆ ಎಂದು ತಿಳಿಸಿದರು.

ಧ್ವನಿ : ಡಾ.ಕೆ.ಸುಧಾಕರ್, ಸಂಸದ (  ಸೆಕೆಂಡುಗಳು)

**><><>END<><><**